ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 14–09–2015

ಪತ್ರಿಕಾ ಆಮಂತ್ರಣ

ಕ್ರಮ ಸಂಖ್ಯೆ	ಕಾರ್ಯಕ್ರಮಗಳ ವಿವರ	ದಿನಾಂಕ / ಸಮಯ	ಕಾರ್ಯಕ್ರಮ ನಡೆಯುವ ಸ್ಥಳ
1.	ಸರ್.ಎಂ. ವಿಶ್ವೇಶ್ವರಯ್ಯನವರ 155 ನೇ ಜನ್ಮ ದಿನೋತ್ಸವದ ಅಂಗವಾಗಿ ಇಂಜಿನಿಯರುಗಳ ದಿನಾಚರಣೆ: ಅ) ತಾಂತ್ರಿಕ ಕಾರ್ಯಾಗಾರದ ಉದ್ಘಾಟನೆ: ಪ್ರೊ. ಜಿ.ಆರ್. ಶ್ರೀನಿವಾಸಮೂರ್ತಿ ಅಧ್ಯಕ್ಷರು, ಗುಣನಿಯಂತ್ರಣ ಕಾರ್ಯಪಡೆ, ಕರ್ನಾಟಕ ಸರ್ಕಾರ. <u>ಅಧ್ಯಕ್ಷತೆ:</u> ಜಿ.ಎನ್. ಚಿಕ್ಕರಾಯಪ್ಪ, ಸರ್ಕಾರದ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.	15–09–2015 ಮಂಗಳವಾರ ಬೆಳಿಗ್ಗೆ 10–30 ಗಂಟೆಗೆ	ಗಾಯಿತ್ರಿ ವಿಹಾರ, ಅರಮನೆ ಮೈದಾನ, ಬೆಂಗಳೂರು.
	ಆ) ಸಮಾರಂಭದ ಉದ್ಘಾಟನೆ: ಸಿದ್ದರಾಮಯ್ಯ, ಮುಖ್ಯಮಂತ್ರಿಗಳು <u>ಅಧ್ಯಕ್ಷತೆ:</u>	15–09–2015 ಮಂಗಳವಾರ ಸಂಜೆ	ಗಾಯಿತ್ರಿ ವಿಹಾರ, ಅರಮನೆ ಮೈದಾನ, ಬೆಂಗಳೂರು.

	ಡಾ. ಸಿ.ಎನ್. ಅಶ್ವಥ್‌ನಾರಾಯಣ, ಶಾಸಕರು, ಮಲ್ಲೇಶ್ವರಂ.	4–00 ಗಂಟೆಗೆ	
2.	"ಸಂಕಲ್ಪ ದಿನ" : ಉದ್ಘಾಟನೆ: ನ್ಯಾಯಮೂರ್ತಿ ಎಂ.ಎನ್. ವೆಂಕಟಾಚಲಯ್ಯ,, ಸರ್ವೋಚ್ಚ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಾಧೀಶರು, ಉಪಸ್ಥಿತಿ: ಹೊ. ಶ್ರೀನಿವಾಸಯ್ಯ, ಗಾಂಧೀವಾದಿಗಳು ಹಾಗೂ ಅಧ್ಯಕ್ಷರು, ಗಾಂಧೀ ಭವನ, ಬೆಂಗಳೂರು. ಅಧ್ಯಕ್ಷತೆ: ಹೆಚ್. ಕೆ. ಪಾಟೀಲ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.	15–09–2015 ಮಂಗಳವಾರ ಬೆಳಿಗ್ಗೆ 10–30 ಗಂಟೆಗೆ	ಗಾಂಧೀ ಭವನ, ಕುಮಾರಪಾರ್ಕ್ ರಸ್ತೆ, ಬೆಂಗಳೂರು
3.	**Planet under Pressure Exhibition** **Inauguration:** **Prof. J. Srinivasan,** **I.I.S.C.** **Bengaluru.**	**15–09–2015** **Tuesday** **at** **11-00 A.M.**	**Visvesvaraya Industrial and Technological Museum, Kasturba Road, Bengaluru.**

ನಿರ್ದೇಶಕರ ಪರವಾಗಿ

ಪತ್ರಿಕಾ ಪ್ರಕಟಣೆ

ದಾಖಲಾತಿ ಪರಿಶೀಲನೆ

ಬೆಂಗಳೂರು, ಸೆಪ್ಟೆಂಬರ್ 14 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 12–07–2015 ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳಿಗೆ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು ದಿನಾಂಕ: 21–09–2015 ಮತ್ತು 22–09–2015 ರಂದು ಬೆಳಿಗ್ಗೆ 9–30 ಗಂಟೆಗೆ ಮತ್ತು ಮಧ್ಯಾಹ್ನ 2–30 ಗಂಟೆಗೆ ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳಿಗೆ 22–09–2015 ರಂದು ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರಿನಲ್ಲಿರುವ ಆಯೋಗದ ಕೇಂದ್ರ ಕಚೇರಿಯಲ್ಲಿ ಮೂಲ ದಾಖಲಾತಿಗಳ ಪರಿಶೀಲನೆಯನ್ನು ನಡೆಸಲಿದೆ.

ಈ ಹುದ್ದೆಗಳ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳು ಆಯೋಗದಿಂದ ಸೆಪ್ಟೆಂಬರ್ 18 ರಿಂದ 22 ರವರೆಗೆ ನಡೆಯುವ ಗೆಜೆಟೆಡ್ ಪ್ರೋಬೇಷನರ್ಸ್ ಮುಖ್ಯ ಪರೀಕ್ಷೆಗಳಿಗೆ ಅರ್ಹರಾಗಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ಸೆಪ್ಟೆಂಬರ್ 23 ರಂದು ಮೂಲ ದಾಖಲಾತಿ ಪರಿಶೀಲನೆ ನಡೆಸಲಾಗುವುದು.

ಪಲ್ಲವಿ:ಬಾಬು:ಜಿಪಿಆರ್.

ಗಣಕಯಂತ್ರ ಶಿಕ್ಷಣ ಪರೀಕ್ಷಾ ಫಲಿತಾಂಶ

ಬೆಂಗಳೂರು, ಸೆಪ್ಟೆಂಬರ್ 14 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ಜುಲೈ 2015 ರ ಮಾಹೆಯಲ್ಲಿ ನಡೆಸಿದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶವನ್ನು ಸೆಪ್ಟೆಂಬರ್ 15 ರಂದು ಮಂಡಳಿಯ ವೆಬ್‌ಸೈಟ್‌ನಲ್ಲಿ **www.kseeb.kar.nic.in** ಪ್ರಕಟಿಸಲಿದೆ. ಶಾಲಾವಾರು ಫಲಿತಾಂಶ ಪಟ್ಟಿಯನ್ನು ಈಗಾಗಲೇ ಶೀಘ್ರ ಅಂಚೆ ಮೂಲಕ ಸಂಬಂಧಿಸಿದ ಸಂಸ್ಥೆಗಳಿಗೆ ಕಳುಹಿಸಲಾಗಿದ್ದು ದಿನಾಂಕ 16–09–2015 ರಂದು 2–00 ಗಂಟೆಗೆ ರಾಜ್ಯದ ಎಲ್ಲಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಕಟಿಸುವಂತೆ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಸೂಚಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ದಂಪತಿಗಳು ಸಾಮೂಹಿಕ ಸರಳ ವಿವಾಹವಾಗಿದ್ದಲ್ಲಿ ಆರ್ಥಿಕ ನೆರವು

ಬೆಂಗಳೂರು, ಸೆಪ್ಟೆಂಬರ್ 14 (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಇಲಾಖೆಯು 2015–16 ನೇ ಸಾಲಿನಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾಗುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ದಂಪತಿಗಳಿಗೆ "ಸರಳ ವಿವಾಹ" ಯೋಜನೆಯಡಿ ರೂ 50,000/–ಗಳ ಆರ್ಥಿಕ ನೆರವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಸಾಮೂಹಿಕ ವಿವಾಹಗಳಲ್ಲಿ ಕನಿಷ್ಟ 10 ಜೋಡಿಗಳು ಭಾಗವಹಿಸಿರತಕ್ಕದ್ದು. ವಯೋಮಿತಿ–ವಧುವಿಗೆ 18 ರಿಂದ 42 ವರ್ಷಗಳು ವರನಿಗೆ 21 ರಿಂದ 45 ವರ್ಷಗಳು. ವಧು–ವರರ ಒಟ್ಟು ವಾರ್ಷಿಕ ಆದಾಯ ರೂ 2.00 ಲಕ್ಷಗಳನ್ನು ಮೀರಿರಬಾರದು. ಜಿಲ್ಲಾ ನೋಂದಣಿ ಕಚೇರಿಯಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು, ದೇವಸ್ಥಾನದ ಟ್ರಸ್ಟ್‌ಗಳು, ಸಂಘಗಳು, ಸೊಸೈಟಿಗಳು ಮತ್ತು ಖಾಸಗಿ ವ್ಯಕ್ತಿಗಳೂ ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾಗಿರಬೇಕು.

ಪ್ರೋತ್ಸಾಹಧನ ಪಡೆಯಲು ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ಸರಳ ವಿವಾಹವಾದ 3 ತಿಂಗಳೊಳಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರಿಗೆ ನಿಗದಿತ ನಮೂನೆಯಲ್ಲಿ ದಿನಾಂಕ 07–11–2015 ರೊಳಗಾಗಿ ಅರ್ಜಿ ಸಲ್ಲಿಸತಕ್ಕದ್ದು.

ಹೆಚ್ಚಿನ ಮಾಹಿತಿ ಮತ್ತು ಅರ್ಜಿಗಳಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ, 4ನೇ ಮೈನ್ ರೋಡ್, 16ನೇ ಅಡ್ಡರಸ್ತೆ, ಸಂಪಂಗಿರಾಮನಗರ, ಬೆಂಗಳೂರು – 560 027 ಕಚೇರಿಯಲ್ಲಿ ಪಡೆಯಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್.

ಪಡಿತರ ಪದಾರ್ಥಗಳ ಬಿಡುಗಡೆ

ಬೆಂಗಳೂರು, ಸೆಪ್ಟೆಂಬರ್ 14 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಲ್ಲಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ಚೀಟಿದಾರರಿಗೆ ವಿತರಿಸುವ ಸಲುವಾಗಿ 2015 ರ ಸೆಪ್ಟೆಂಬರ್ ಮಾಹೆಗೆ ಆಹಾರಧಾನ್ಯಗಳನ್ನು ಈ ಕೆಳಕಂಡ ಪ್ರಮಾಣ ಹಾಗೂ ದರದಲ್ಲಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ.

ಎಎವೈ ಮತ್ತು ಬಿಪಿಎಲ್ ಪಡಿತರ ಚೀಟಿಗಳಿಗೆ ಉಚಿತವಾಗಿ ಆಹಾರಧಾನ್ಯ ವಿತರಣೆಯಾಗುತ್ತಿದ್ದು, ದಕ್ಷಿಣ ಕರ್ನಾಟಕದ ಜಿಲ್ಲೆಗಳಾದ ಚಾಮರಾಜನಗರ, ಚಿತ್ರದುರ್ಗ, ದಾವಣಗೆರೆ, ಮೈಸೂರು, ಮಂಡ್ಯ, ಕೋಲಾರ, ಹಾಸನ, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಶಿವಮೊಗ್ಗ, ಕೊಡಗು, ತುಮಕೂರು ಜಿಲ್ಲೆಗಳಿಗೆ ಎಎವೈ ಪಡಿತರ ಚೀಟಿಗಳಿಗೆ 35 ಕೆ.ಜಿ. ಹಾಗೂ ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆಜಿ ಅಕ್ಕಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ.

ರಾಮನಗರ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಎಎವೈ ಪಡಿತರ ಚೀಟಿಗಳಿಗೆ 29 ಕೆಜಿ ಅಕ್ಕಿ, 6 ಕೆಜಿ ಗೋಧಿ ಹಾಗೂ ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 4 ಕೆ.ಜಿ. ಅಕ್ಕಿ, 1 ಕೆಜಿ ಗೋಧಿ ಹಂಚಿಕೆ ನೀಡಲಾಗಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಬೆಂಗಳೂರು ಆ.ಪ. ಜಿಲ್ಲೆಗಳ ಎಎವೈ ಪಡಿತರ ಚೀಟಿಗಳಿಗೆ 29 ಕೆಜಿ ಅಕ್ಕಿ ಹಾಗೂ 6 ಕೆ.ಜಿ. ರಾಗಿ, ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 4 ಕೆಜಿ ಅಕ್ಕಿ 1 ಕೆ.ಜಿ. ರಾಗಿ ಹಂಚಿಕೆ ನೀಡಲಾಗಿದೆ.

ಉತ್ತರ ಕರ್ನಾಟಕದ ಬಳ್ಳಾರಿ, ಬೀದರ್, ವಿಜಯಪುರ ಕಲಬುರ್ಗಿ, ಕೊಪ್ಪಳ, ರಾಯಚೂರು, ಯಾದಗೀರ್, ಹಾವೇರಿ, ಬೆಳಗಾವಿ, ಬಾಗಲಕೋಟೆ, ಧಾರವಾಡ ಹಾಗೂ ಗದಗ ಜಿಲ್ಲೆಗಳ ಎಎವೈ ಪಡಿತರ ಚೀಟಿಗಳಿಗೆ 29 ಕೆಜಿ ಅಕ್ಕಿ 6 ಕೆಜಿ ಗೋಧಿ, ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 3 ಕೆಜಿ ಅಕ್ಕಿ 2 ಕೆಜಿ ಗೋಧಿ ಹಂಚಿಕೆ ನೀಡಲಾಗಿದೆ.

ಎಎವೈ ಮತ್ತು ಬಿಪಿಎಲ್ ಪ್ರತಿ ಪಡಿತರ ಚೀಟಿಗೆ ತಾಳೆ ಎಣ್ಣೆ 1 ಲೀ. ರೂ. 25/– ರಂತೆ ಅಯೋಡಿನ್‌ಯುಕ್ತ ಉಪ್ಪು ಒಂದು ಕೆ.ಜಿ. ರೂ. 2/– ರಂತೆ ಹಾಗೂ ಸೆಪ್ಟೆಂಬರ್ 2015 ರ ಮಾಹೆಗೆ ಸಕ್ಕರೆ ಹಂಚಿಕೆ ಇರುವುದಿಲ್ಲ.

ನೋಂದಣಿಯಾದ ಎಪಿಎಲ್ ಪಡಿತರ ಚೀಟಿಯ ಏಕ ಸದಸ್ಯ ಕುಟುಂಬಕ್ಕೆ 5 ಕೆ.ಜಿ. ಆಹಾರ ಧಾನ್ಯವನ್ನು (3 ಕೆ.ಜಿ. ಅಕ್ಕಿ ಮತ್ತು 2 ಕೆ.ಜಿ. ಗೋಧಿ) ಹಾಗೂ ಒಂದಕ್ಕಿಂತ ಹೆಚ್ಚು ಸದಸ್ಯರಿರುವ ಕುಟುಂಬಕ್ಕೆ 10 ಕೆ.ಜಿ. ಆಹಾರಧಾನ್ಯವನ್ನು (5 ಕೆ.ಜಿ. ಅಕ್ಕಿ 5 ಕೆ.ಜಿ. ಗೋಧಿ) ಪ್ರತಿ ಕೆ.ಜಿ. ಅಕ್ಕಿಗೆ ರೂ. 15/– ಹಾಗೂ ಪ್ರತಿ ಕೆ.ಜಿ. ಗೋಧಿಗೆ ರೂ. 10/– ರ ದರದಲ್ಲಿ ಹಂಚಿಕೆ ನೀಡಲಾಗಿದೆ.

ಎಎವೈ ಮತ್ತು ಬಿಪಿಎಲ್‌ನ ಏಕ ಸದಸ್ಯ ಮತ್ತು ದ್ವಿ ಸದಸ್ಯ ಅನಿಲ ರಹಿತ ಪಡಿತರ ಚೀಟಿಗಳಿಗೆ 3 ಲೀಟರ್‌ನಂತೆ, ಮೂರು ಮತ್ತು ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗಳಿಗೆ 4 ಲೀಟರ್‌ನಂತೆ ಹಾಗೂ ಗ್ರಾಮಾಂತರ ಪ್ರದೇಶದ ಎಪಿಎಲ್ ಅನಿಲ ರಹಿತ ಪಡಿತರ ಚೀಟಿಗಳಿಗೆ 2 ಲೀಟರ್‌ನಂತೆ ವಿತರಣಾ ಪ್ರಮಾಣವನ್ನು ನಿಗದಿಪಡಿಸಿ ಹಂಚಿಕೆ ನೀಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಕಟಣೆ ತಿಳಿಸಿದೆ.

ಪಲ್ಲವಿ/ಬಾಬು/ಕೆಎಂ